# ಸಹಾಯಕ ಆಯುಕ್ತರವರ ನ್ಯಾಯಾಲಯ, ಹೊಸಪೇಟೆ

ಎ.ವಿಲೇ.ನಂ.ಕಂ.ಪಹಣಿ.ಅಪೀಲು:29/2015-16 ದಿನಾಂಕ:19.07.2016.

**ಉಪಸ್ಥಿತರು: ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ**
**ಸಹಾಯಕ ಆಯುಕ್ತರು, ಹೊಸಪೇಟೆ**

**ವಾದಿಗಳು: ಶ್ರೀ/ ಶ್ರೀಮತಿ**

1. ಶಿವಗಂಗಮ್ಮ @ ಶಿವಲೀಲಾ ಗಂಡ ಶಂಕ್ರಪ್ಪ ಚಳ್ಳಿ ಮರದ, ಗೌರಿಶಂಕರ ನಗರ, **ವಾಸ:** ಗೌರಿಶಂಕರ ನಗರ ರಾಣಿಬೆನ್ನೂರು ಜಿಲ್ಲೆ.

**[ಶ್ರೀ ಪಿ.ಆರ್.ಕುಪ್ಪೇಲೂರು, ವಕೀಲರು, ಗೌರಿಶಂಕರ ನಗರ, ರಾಣಿಬೆನ್ನೂರು ]**

**ಪ್ರತಿವಾದಿಗಳು: ಶ್ರೀ/ ಶ್ರೀಮತಿ**

1. ಶಿಲ್ಪ ತಂದೆ ಶಂಕರಗೌಡ ಪಾಟೀಲ್,
2. ಜಯಪ್ಪ ತಂದೆ ನಿಂಗಪ್ಪ ಚಳ್ಳಿಮರದ, **ವಾಸ:** ಮೈಲಾರ ಗ್ರಾಮ, ಹೂವಿನಹಡಗಲಿ ತಾಲೂಕು, ಬಳ್ಳಾರಿ ಜಿಲ್ಲೆ.
3. ಕಂದಾಯ ನಿರೀಕ್ಷಕರು, ಹಡಗಲಿ.
4. ತಹಶೀಲ್ದಾರರು, ಹಡಗಲಿ.

********

**ವ್ಯಾಜ್ಯದ ಜಮೀನು:**

| ತಾಲೂಕು | ಹೋಬಳಿ | ಗ್ರಾಮ | ಸ.ನಂ. | ವಿಸ್ತೀರ್ಣ |
|---|---|---|---|---|
| ಹಡಗಲಿ | ಹಡಗಲಿ | ಮಾಗಳ | 572 | 10 ಎಕರೆ 60 ಸೆಂಟ್ಸ್ |
| | | | 575/ಎ/3 | 09 ಎಕರೆ 00 ಸೆಂಟ್ಸ್ |

**ಪೀಠಿಕೆ:**

ಹಡಗಲಿ ತಾಲೂಕು ಹಡಗಲಿ ಹೋಬಳಿ ಮಾಗಳ ಗ್ರಾಮದ ಸ.ನಂ.572 ವಿಸ್ತೀರ್ಣ:10 ಎಕರೆ 60 ಸೆಂಟ್ಸ್; ಸ.ನಂ.575/ಎ/3 ವಿಸ್ತೀರ್ಣ:09 ಎಕರೆ 00 ಸೆಂಟ್ಸ್; ವಿವಾದಾಸ್ಪದ ಜಮೀನುಗಳಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು, ಹಡಗಲಿ ಇವರ ಹಕ್ಕು ಬದಲಾವಣೆ ಆದೇಶ ಸಂಖ್ಯೆ:85/2002-03 ದಿನಾಂಕ:25.11.2002 ವನ್ನು ಪ್ರಶ್ನಿಸಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136[2] ರಡಿಯಲ್ಲಿ ಮೇಲ್ಮನವಿಯನ್ನು ವಾದಿಪರ ವಕೀಲರು ದಿನಾಂಕ:09.06.2015 ರಂದು ಸಲ್ಲಿಸಿರುತ್ತಾರೆ.

ವಾದಿಗಳ ಪರ ವಕೀಲರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ, ನೈಸರ್ಗಿಕ ನ್ಯಾಯದ ಹಿತದೃಷ್ಟಿಯಿಂದ ಪ್ರಕರಣದ ವಿಚಾರಣೆಯನ್ನು ದಿನಾಂಕ:25.06.2015 ಕ್ಕೆ ನಿಗಧಿಪಡಿಸಿ ಉಭಯಪಕ್ಷಗಳಿಗೆ ನೋಟೀಸು ಮೂಲಕ ತಿಳಿಸಿ ವಿಚಾರಣೆಯನ್ನು ಪ್ರಾರಂಭಿಸಲಾಯಿತು.

ಆದರೆ, ವಿಚಾರಣೆ ಪ್ರಾರಂಭಿಸಿದಾಗಿನಿಂದ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿದ್ದು, ಪ್ರಕರಣದಲ್ಲಿ ಆಸಕ್ತಿ ಇಲ್ಲದೇ ಇರುವುದು ಕಂಡುಬಂದಿರುತ್ತದೆ. ಹಾಗೂ ತಮ್ಮ ಅಪೀಲನ್ನು ಸಾಬೀತುಪಡಿಸಿಕೊಳ್ಳಲು ಪೂರಕವಾದ ಯಾವುದೇ ದಾಖಲೆಗಳನ್ನು ಸಹ ಸಲ್ಲಿಸಿರುವುದಿಲ್ಲ. ಆದುದರಿಂದ, ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಈ ಕೆಳಕಂಡಂತೆ

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿರುವುದರಿಂದ, ಸದರಿ ಅಪೀಲನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲಾಗಿದೆ. (dismissed for default).

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:19.07.2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಿದೆ.

[ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ]
ಸಹಾಯಕ ಆಯುಕ್ತರು,
ಹೊಸಪೇಟೆ.

ವಾದಿ : ಪ್ರತಿವಾದಿಗಳಿಗೆ
**ಪ್ರತಿಯನ್ನು:** ತಹಶೀಲ್ದಾರರು, ಹಡಗಲಿ ಇವರಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.